ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಇಲಾಖೆ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಮಾ. 14, 2015

ಸಂಖ್ಯೆ : ವಾಇ : ಉ ನಿ : ಸುಮಪ : 2014–15

**ಪತ್ರಿಕಾ ಪ್ರಕಟಣೆ**

**ಆಹಾರ ಭದ್ರತೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕಿದೆ–ಪ್ರೊ..ರಾವ್**

ಬೆಂಗಳೂರು. ಮಾ.15: ಎಲ್ಲೆಡೆ ಆಹಾರ ಭದ್ರತೆ ಇಂದಿಗೂ ಸಮಸ್ಯೆಯಾಗಿ ಉಳಿದಿದ್ದು, ಭಾರತದಲ್ಲಿ ಆಹಾರ ಭದ್ರತೆಗೆ ಬಹು ಮುಖ್ಯ ಪ್ರಾಮುಖ್ಯತೆ ನೀಡಬೇಕಿದೆ ಎಂದು ಭಾರತ ರತ್ನ ಪ್ರೊ. ಸಿ.ಎನ್. ಆರ್ ರಾವ್ ಅವರು ಕರೆ ನೀಡಿದರು .

ಅವರು ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಆವರಣದಲ್ಲಿಂದು ಏರ್ಪಡಿಸಲಾಗಿದ್ದ ನಲವತ್ತೊಂಬತ್ತನೆಯ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನ್ನಾಡುತ್ತಾ, ಆಹಾರ, ನೀರು, ಜೀವಸಂಕುಲಕ್ಕೆ ಅತ್ಯವಶ್ಯಕವಾಗಿದ್ದು, ಕೃಷಿ ಸಂಶೋಧನಾ ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಹೆಚ್ಚಿನ ಗಮನ ಹರಿಸುವ ಮೂಲಕ ಇವುಗಳ ಭದ್ರತೆಗೆ ಹೆಚ್ಚು ಒತ್ತು ನೀಡಬೇಕಿದೆ ಎಂದು ಅವರು ತಿಳಿಸಿದರು.

ನ್ಯಾನೋ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇತ್ತೀಚಿನ ದಿನಗಳಲ್ಲಿ ಬಹಳ ಪ್ರಾಮುಖ್ಯತೆ ಪಡೆಯುತ್ತಿದೆ ಎಂದ ಅವರು, ಕೃಷಿ ಕ್ಷೇತ್ರಕ್ಕೆ ಸಸ್ಯ ಸಂಕುಲ ಒಂದು ಅದ್ಭುತ ಕೊಡುಗೆ ಎನ್ನಬಹುದು ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳು ಸಂಶೋಧನಾ ಕ್ಷೇತ್ರದಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದ ಅವರು, ಕೃಷಿ ಸಂಶೋಧನಾ ವಿದ್ಯಾರ್ಥಿಗಳು ತನ್ಮಯತೆಯಿಂದ , ಏಕಾಗ್ರತೆಯಿಂದ ಅಧ್ಯಯನದಲ್ಲಿ ತೊಡಗಿಸಿಕೊಂಡಾಗ ಮಾತ್ರ ಯಶಸ್ಸು ಸಾಧ್ಯ ಎಂದು ರಾವ್ ಕರೆ ನೀಡಿದರು.

ಕೃಷಿ ವಿಜ್ಞಾನ ಸೇರಿದಂತೆ ಯಾವುದೇ ಕ್ಷೇತ್ರದಲ್ಲಾಗಲಿ ಸಾಧನೆಯ ಫಲಿತಾಂಶ ತತ್‌ಕ್ಷಣ ದೊರಕದು.ತಾಳ್ಮೆ, ಸಂಯಮದಿಂದ ಕಾದಾಗ ಮಾತ್ರ ಪ್ರತಿಫಲ ದೊಕುವುದು ಎಂದ ಅವರು, ಭಾರತ ದೇಶ ಯುವಶಕ್ತಿಯ ಮೇಲೆ ಅಪಾರ ನಿರೀಕ್ಷೆಯಿಟ್ಟುಕೊಂಡಿದ್ದು, ಯುವ ಜನಾಂಗ ದೇಶಕ್ಕೆ ನಿರಾಸೆ ಮಾಡದಂತೆ ಸಾಧನೆ ಮಾಡಬೇಕು ಎಂದು ಅವರು ಕರೆ ನೀಡಿದರು.

49 ಘಟಿಕೋತ್ಸವದ ಈ ಸಂದರ್ಭ ರಾಜ್ಯಪಾಲರಾದ ಸನ್ಮಾನ್ಯ ಶ್ರೀ ವಜುಭಾಯಿವಾಲ ಅವರು 574 ಸ್ನಾತಕ, 204 ಸ್ನಾತಕೋತ್ತರ ಮತ್ತು 67 ಡಾಕ್ಟರಲ್ ಪದವಿ ಮತ್ತು 119 ಚಿನ್ನದ ಪದಕಗಳನ್ನು ವಿದ್ಯಾರ್ಥಿಗಳಿಗೆ ಪ್ರದಾನ ಮಾಡಿದರು.

ಕೃಷಿ ಸಚಿವರಾದ ಶ್ರೀ ಕೃಷ್ಣ ಬೈರೇಗೌಡ ಅವರು ಈ ಸಂದರ್ಭ ಉಪಸ್ಥಿರಿದ್ದರು.

************************************************************************************